Edition #1

WWW.THERURALMIRROR.COM

05 ಮಾರ್ಚ್ 2024

# ದ ರೂರಲ್ ಮಿರರ್

Constructive Media




# ಉಷ್ಣ ಮಾರುತದ ಆತಂಕ

## ರಾಜ್ಯದಲ್ಲಿ ಉಷ್ಣ ಮಾರುತ ಪ್ರಭಾವ ಏನು

ಭಾರತೀಯ ಹವಾಮಾನ ಇಲಾಖೆಯ ವರದಿಯಂತೆ 2024 ಮಾರ್ಚ್ ನಿಂದ ಮೇ ತಿಂಗಳ ಕೊನೆಯ ತನಕ ಭಾರತದ ಹೆಚ್ಚಿನ ಭಾಗಗಳಲ್ಲಿ (ಮಧ್ಯ ಭಾರತ, ದಕ್ಷಿಣ ಭಾರತದ ಉತ್ತರ ಕರ್ನಾಟಕ, ಆಂಧ್ರಾ ತನಕ) ಉಷ್ಣ ಮಾರುತ ಬೀಸುವ ಆತಂಕ ಇದೆ. ಸದ್ಯ ಉಷ್ಣ ಮಾರುತದ ಪ್ರಭಾವ ತಗ್ಗಿದೆ.

**ಕರ್ನಾಟಕದಲ್ಲಿ ಉಷ್ಣ ಮಾರುತ ಪರಿಣಾಮ :** ಉತ್ತರ ಕರ್ನಾಟಕ ಹೆಚ್ಚಿನ ಭಾಗಗಳಲ್ಲಿ ಹಾಗೂ ದಕ್ಷಿಣ ಒಳನಾಡು ಭಾಗಗಳಲ್ಲಿ ಉಷ್ಣ ಮಾರುತ ಬೀಸುವ ಮುನ್ಸೂಚನೆ ಹವಾಮಾನ ಇಲಾಖೆ ನೀಡಿದೆ. ಜೊತೆಗೆ ಎಲ್ನಿನೋ ಪ್ರಭಾವ ಕುಸಿತಗೊಳ್ಳುತ್ತಿದ್ದರೂ ಸಂಪೂರ್ಣ ಶಿಥಿಲಗೊಂಡಿಲ್ಲ. ಉತ್ತರದ ಕಡೆಯಿಂದ ಉಷ್ಣ ಮಾರುತಗಳು ಆರಂಭವಾದರೆ ಶುಷ್ಕ ಹವೆ ಮುಂದುವರಿಯಬಹುದು. ಮಾರ್ಚ್ ತಿಂಗಳಲ್ಲಿ ಮಳೆಯ ಸಾಧ್ಯತೆ ಕಡಿಮೆಯಾಗುವ ಲಕ್ಷಣ ಇದೆ. ವರದಿಯಂತೆ ಪೆಸಿಫಿಕ್ ಸಾಗರ ಹಾಗೂ ಹಿಂದೂಮಹಾಸಾಗರದ ಮೇಲ್ಮೈ ಉಷ್ಣತೆ ಈಗಾಗಲೇ ಸಾಮಾನ್ಯಕ್ಕಿಂತ ಹೆಚ್ಚಿದೆ.ಹಾಗಾಗಿ ಉಷ್ಣ ಮಾರುತದ ಜೊತೆಗೆ ಅರಬ್ಬಿ ಸಮುದ್ರ ಅಥವಾ ಬಂಗಾಳಕೊಲ್ಲಿಯಲ್ಲಿಯ ಮೂಲಕ ಗಾಳಿ ಭೂಮಿಗೆ ಬೀಸಲು ಆರಂಭವಾದರೆ ಮಳೆಯ ಸಾಧ್ಯತೆ ಇರಬಹುದು.

SCAN ME

ಕಳೆದ ವರ್ಷ ಎಲ್ ನಿನೋ ಪ್ರಭಾವವು ಮುಂಗಾರು ಮೇಲೆ ಪರಿಣಾಮ ಬೀರಿ ರಾಜ್ಯದಲ್ಲಿ ಮಳೆ ಕೊರತೆಯಾಗಿತ್ತು. ಆದರೆ, ಜಾಗತಿಕ ನಿಯಂತ್ರಕ ಸೂಚ್ಯಂಕದ ಪ್ರಕಾರ ಕಳೆದ ಫೆಬ್ರವರಿಯಿಂದ ಎಲ್ ನಿನೋ ಮಧ್ಯಮ ಹಂತಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ಉತ್ತಮ ಮಳೆ ಬೀಳುವ ಸಾಧ್ಯತೆ ಇದೆ ಎಂದು ರಾಜ್ಯ ಹವಾಮಾನ ಇಲಾಖೆ ವಿಜ್ಞಾನಿ ಎ.ಪ್ರಸಾದ್ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ.

ಫೆಸಿಫಿಕ್ ಸಮುದ್ರದ ಪಶ್ಚಿಮ ಭಾಗದಲ್ಲಿ ನೀರಿನ ಉಷ್ಣಾಂಶ ವಾಡಿಕೆಗಿಂತ ಹೆಚ್ಚು ಇದ್ದರೆ ಲಾ-ನಿನಾ ಎಂದು ಕರೆಯಲಾಗುತ್ತಿದ ಎಲ್ ನಿನೋ ಮತ್ತು ಲಾ-ನಿನಾ ಪರಿಸ್ಥಿತಿ ಮಳೆ ಮೇಲೆ ಪರಿಣಾಮ ಬೀರಲಿದೆ. ಈ ವರ್ಷ ಇವೆರಡೂ ಸಾಧಾರಣ ಮಟ್ಟದಲ್ಲಿ ಇರುವುದರಿಂದ ಮುಂಗಾರು, ಹಿಂಗಾರಿನಲ್ಲಿ ಉತ್ತಮ ವರ್ಷಧಾರೆಯಾಗಲಿದೆ.ಏಪ್ರಿಲ್ ಮೊದಲ ವಾರದಿಂದ ಕೆಲವೆಡೆ ವರ್ಷಧಾರೆಯಾಗಲಿದೆ ಎಂದು ಮಾಹಿತಿ ನೀಡಿದರು.



# ಉಂಡೆ ಕೊಬ್ಬರಿ ಖರೀದಿಗೆ ಪ್ರೋತ್ಸಾಹ ಧನ ನಿಗದಿ

2024ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಎಫ್ ಎ ಕ್ಯೂ ಗುಣಮಟ್ಟದ ಉಂಡೆ ಕೊಬ್ಬರಿ ಖರೀದಿಗಾಗಿ ಖರೀದಿ ಕೇಂದ್ರಗಳಿಗೆ ಪ್ರೋತ್ಸಾಹ ಧನವನ್ನು ನಿಗದಿಪಡಿಸಿ ಖರೀದಿಗಾಗಿ ಕೇಂದ್ರಗಳನ್ನು ತೆರೆಯಲಾಗಿದೆ.

ಕೇಂದ್ರ ಸರ್ಕಾರ ಘೋಷಿಸಿರುವ ಬೆಂಬಲ ಬೆಲೆ ದರ ಪ್ರತಿ ಕ್ವಿಂಟಲ್ ರೂ. 12 ಸಾವಿರ ಆಗಿದ್ದು, 2023ನೇ ಸಾಲಿಗೆ ಘೋಷಿಸಲಾದ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಪ್ರತಿ ಕ್ವಿಂಟಲ್ ರೂ 1,250ರ ಜೊತೆಗೆ 2024ನೇ ಸಾಲಿಗೆ ಪ್ರತಿ ಕ್ವಿಂಟಲ್ ಗೆ 250 ರೂ ಸೇರಿ ಒಟ್ಟು 1,500 ರೂಪಾಯಿ ಪ್ರೋತ್ಸಾಹಧನ ನಿಗದಿಪಡಿಸಲಾಗಿದೆ.

ಖರೀದಿ ಕೇಂದ್ರ ಹಾಗೂ ಸಂಪರ್ಕಿಸಬೇಕಾದವರ ವಿವರ: ಮಂಗಳೂರು ತಾಲೂಕಿನ ಪದು ಶಕ್ತಿನಗರ - ಉದಯಕುಮಾರ್ ಎಂ.ಬಿ, ದೂರವಾಣಿ ಸಂಖ್ಯೆ: 8277423321 ಮೂಡಬಿದ್ರೆ ತಾಲೂಕಿನ ಅಲಂಗಾರು - ಸ್ವಾಮಿ ಎನ್.ಎಂ, ದೂರವಾಣಿ ಸಂಖ್ಯೆ: 9743881102, ಬಂಟ್ವಾಳ ತಾಲೂಕಿನ ಟಿ.ಎ.ಪಿ.ಸಿ.ಎಂ. ಎಸ್ ಆವರಣ, ಕಳ್ಳಿಗೆ, ಬಿಸಿ ರೋಡು, - ಚೇತನ್ ನಾಯಕ್ ಎಂ.ಎಸ್ ದೂರವಾಣಿ ಸಂಖ್ಯೆ: 973939 8489, ಬೆಳ್ತಂಗಡಿ ತಾಲೂಕಿನ ಎಪಿಎಂಸಿ ಬೆಳ್ತಂಗಡಿ - ಸಂದೀಪ್ ಶೆಟ್ಟಿ ದೂರವಾಣಿ ಸಂಖ್ಯೆ: 9113575856, ಪುತ್ತೂರು ತಾಲೂಕಿನ ಎಪಿಎಂಸಿ ಪುತ್ತೂರು,- ಚೇತನ್ ನಾಯಕ್ ಎಂ.ಎಸ್, ದೂರವಾಣಿ ಸಂಖ್ಯೆ: 9739398489, ಸುಳ್ಯ ತಾಲೂಕಿನ ಎಪಿಎಂಸಿ ಸುಳ್ಯ, - ಸಂದೀಪ್, ದೂರವಾಣಿ ಸಂಖ್ಯೆ 9844700054 ಹಾಗೂ ಮಂಗಳೂರು ತಾಲೂಕಿನ ಬೈಕಂಪಾಡಿ ಮಾರುಕಟ್ಟೆ ಪ್ರಾಂಗಾಣ - ಶಮಿದ್ ಅಲಿ ದೂರವಾಣಿ ಸಂಖ್ಯೆ: 812363 8362 ಸಂಪರ್ಕಿಸಬಹುದು.

ಉಂಡೆ ಕೊಬ್ಬರಿ ಖರೀದಿಗೆ ಅಗತ್ಯವಿರುವ ದಾಖಲೆಗಳು:-
ರೈತರು ತಮ್ಮ ಹೆಸರನ್ನು ತಂತ್ರಾಂಶದಲ್ಲಿ ನೋಂದಾಯಿಸಿರಬೇಕು. ರೈತರು ಕೃಷಿ ಇಲಾಖೆಯನ್ನು ಸಂಪರ್ಕಿಸಿ ಅವಶ್ಯಕತೆ ಮಾಹಿತಿಯನ್ನು ಪಡೆದುಕೊಳ್ಳಬೇಕು. ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪುಸ್ತಕದ ನಕಲು, ಎಫ್.ಎ.ಕ್ಯೂ ಗುಣಮಟ್ಟದ ಉಂಡೆ ಕೊಬ್ಬರಿ ಉತ್ಪನ್ನವನ್ನು ಕೇಂದ್ರಕ್ಕೆ ಮಾರಲು ತರಬೇಕು.

ರೈತರು ಎಪ್ರಿಲ್ 3 ರ ರೊಳಗೆ ಉಂಡೆಕೊಬ್ಬರಿ ಕೇಂದ್ರದಲ್ಲಿ ತಮ್ಮ ಹೆಸರು ನೋಂದಾಯಿಸಬಹುದು. ಮೇ 19ರ ವರೆಗೆ ಉಂಡೆ ಕೊಬ್ಬರಿ ಉತ್ಪನ್ನಗಳನ್ನು ಬೆಳಿಗ್ಗೆ 8 ರಿಂದ ಸಂಜೆ 6 ಗಂಟೆವರೆಗೆ ಖರೀದಿಸಲಾಗುವುದು.

ಹೆಚ್ಚಿನ ಮಾಹಿತಿಗೆ ಮಂಗಳೂರಿನ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಶಾಖಾ ವ್ಯವಸ್ಥಾಪಕರು(ದೂರವಾಣಿ ಸಂಖ್ಯೆ 9449864424) ಗೆ ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳೂ ಆಗಿರುವ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರಾದ ಮುಲ್ಲೈ ಮುಗಿಲನ್ ಎಂ.ಪಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಾವೇರಿ ಜಿಲ್ಲೆಗೆ ಬರಗಾಲದ ಛಾಯೆ

ರಾಜ್ಯಕ್ಕೆ ಈ ಬಾರಿ ತೀವ್ರಮಟ್ಟದ ಬರಗಾಲ ಕಾಡುವ ಭೀತಿ ಎದುರಾಗಿದೆ. ಮಳೆಗಾಲಕ್ಕೆ ಇನ್ನು ಮೂರರಿಂದ ನಾಲ್ಕು ತಿಂಗಳುಗಳು ಬಾಕಿ ಇವೆ. ಆದರೆ ನೀರಿನ ಕೊರತೆ ಈಗಾಗಗಲೇ ಹೈರಣಾಗಿಸಿದೆ. ರಾಜ್ಯದಲ್ಲಿ ಈ ಬಾರಿ ಮಳೆ ಕೊರತೆಯಿಂದಾಗಿ ಹಲವಾರು ಜಿಲ್ಲೆಗಳಲ್ಲಿ ಬರಗಾಲದ ಛಾಯೆ ಆವರಿಸಿದೆ. ಇನ್ನೂ ಹಾವೇರಿ ಜಿಲ್ಲೆಯ ಜೀವನದಿ ವರದಾ ನದಿಯ ಒಡಲು ಬರಿದಾಗುತ್ತಿದ್ದು, ಜನ ಹಾಗೂ ಜಾನುವಾರುಗಳಿಗೆ ಕುಡಿಯಲು ನೀರಿಲ್ಲದೇ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ವರದಾ ನದಿಗೆ ನಿರ್ಮಿಸಲಾಗಿದ್ದ ಚೆಕ್ ಡ್ಯಾಂಗಳಲ್ಲೂ ನೀರು ಖಾಲಿಯಾಗಿದೆ. ಜಿಲ್ಲೆಯ 15 ಕ್ಕೂ ಅಧಿಕ ಚೆಕ್ ಡ್ಯಾಂಗಳು ನೀರಿಲ್ಲದೆ ಬರಿದಾಗಿವೆ. ವರದಾ ನದಿಯಿಂದ ದೇವಗಿರಿ, ಯಲ್ಲಾಪುರ ಮನ್ನಂಗಿ ಮತ್ತು ಮೇಳಗಟ್ಟಿಗೆ ಗ್ರಾಮಕ್ಕೆ ಕುಡಿಯುವ ನೀರಿನ ಯೋಜನೆ ಮೂಲಕ ನೀರನ್ನು ಗ್ರಾಮಗಳಿಗೆ ಒದಗಿಸಲಾಗುತ್ತಿತ್ತು. ಈಗ ವರದಾ ನದಿ ಸಂಪೂರ್ಣವಾಗಿ ಖಾಲಿಯಾಗಿದ್ದು ಜನರು ಸಂಕಷ್ಟಕ್ಕೀಡಾಗಿದ್ದಾರೆ.

ಇನ್ನೂ ರೈತರು ಕೃಷಿಗಾಗಿ ಪಂಪ್‌ಗಳನ್ನು ಬಳಸಿ ಇರುವ ನೀರನ್ನೂ ಖಾಲಿ ಮಾಡುತ್ತಿದ್ದಾರೆ. ಈಗಾಗಲೇ ಕುಡಿಯುವ ನೀರಿಗೆ ಸಂಕಷ್ಟ ಎದುರಾಗಿದ್ದು, ಮುಂದಿನ ದಿನಗಳಲ್ಲಿ ಹನಿ ನೀರಿಗೂ ಪರದಾಡುವ ಪರಿಸ್ಥಿತಿ ನಿರ್ಮಾಣವಾಗುವ ಭೀತಿ ಕಾಡುತ್ತಿದೆ.

SCAN ME

# ಕೃಷಿ ತ್ಯಾಜ್ಯಗಳನ್ನು ಬೆಂಕಿಗೆ ಹಾಕೋದಲ್ಲ

ಸಾಮಾನ್ಯವಾಗಿ ಯಾವುದೇ ಕೃಷಿ ತ್ಯಾಜ್ಯದಲ್ಲಿ ಎಲ್ಲಾ ರೀತಿಯ ಪೋಷಕಾಂಶ ಲಭ್ಯವಾಗುತ್ತದೆ. ಪ್ರಧಾನವಾಗಿ ಪರಿಗಣಿಸುವ NPK(ಸಾರಾಜನಕ (NITROGEN), ರಂಜಕ(PHOSPHORUS), ಪೊಟಾಷ್(POTASH )ತೆಗೆದುಕೊಂಡರೆ, ಪ್ರತಿ ಟನ್ ಒಂದಕ್ಕೆ 5.5 ಕೆಜಿ ಸಾರಾಜನಕ, 2.5 ಕೆಜಿ ರಂಜಕ, 25 ಕೆಜಿ ಪೊಟ್ಯಾಸಿಯಂ ರೀತಿ 04 ಟನ್ ಕೃಷಿ ತ್ಯಾಜ್ಯದಲ್ಲಿ 22 ಕೆಜಿ ಸಾರಾಜನಕ, 10 ಕೆಜಿ ರಂಜಕ, 100 ಕೆಜಿ ಪೊಟ್ಯಾಸಿಯಂ ಲಭ್ಯವಾಗುತ್ತದೆ.

ಈ ಪ್ರಮಾಣದ NPK ಯನ್ನು ರಸಗೊಬ್ಬರ(FERTILIZER) ಮೂಲಕ ಬೆಳೆಗಳಿಗೆ ನೀಡಬೇಕಾದರೆ ಯೂರಿಯಾ :100 ಕೆಜಿ, ಡಿ.ಎ.ಪಿ:20 ಕೆಜಿ, ಮ್ಯೂರೇಟ್ ಆಫ್ ಪೊಟಾಷ್ (MOP):167 ಕೆಜಿ ನೀಡಬೇಕಾಗುತ್ತದೆ. ಈ ಪ್ರಮಾಣದ ರಾಸಾಯನಿಕ ಗೊಬ್ಬರಕ್ಕೆ ತಗುಲುವ ಮೂಲ ಬೆಲೆ ಸುಮಾರು ರೂ 16,000/ ಗಳು, ಈ ಪ್ರಕಾರ 01 ಟನ್ ಕೃಷಿ ತ್ಯಾಜ್ಯದ ಮೌಲ್ಯವನ್ನು ಕೇವಲ ರಸಗೊಬ್ಬರಕ್ಕೆ(NPK) ಸರಿಸಾಮಾನವಾಗಿ ನೋಡಿದಾಗ ರೂ 4000/.

01 ಟನ್ ಕೃಷಿ ತ್ಯಾಜ್ಯಕ್ಕೆ ಬೆಂಕಿ ಹಾಕಿ ಸುಟ್ಟರೆ 1460 ಕೆಜಿ ಕಾರ್ಬನ್ ಡೈಆಕ್ಸೈಡ್ ಜೊತೆಗೆ ನೈಟ್ರಸ್ ಆಕ್ಸೈಡ್, ಕಾರ್ಬನ್ ಮಾನಾಕ್ಸೈಡ್, ಮೀಥೇನ್ ಮತ್ತು ಇನ್ನಿತರೇ ವಿಷಕಾರಕ ಅನಿಲಗಳು ವಾತಾವರಣಕ್ಕೆ ಸೇರುವುದರಿಂದ ಹವಾಮಾನ ಬದಲಾವಣೆಗೆ ಕಾರಣವಾಗಿ ಪರಿಸರದಲ್ಲಿ ಅಸಮತೋಲನ ಉಂಟಾಗುತ್ತದೆ. ಕೃಷಿ ತ್ಯಾಜ್ಯಗಳಿಗೆ ಬೆಂಕಿ ಹಾಕುವುದರಿಂದ ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳು ಸಾಯುತ್ತದೆ. ಮಣ್ಣಿನ ಫಲವತ್ತತೆ ಕುಂಠಿತವಾಗುತ್ತದೆ. ಮಣ್ಣಿನಲ್ಲಿ ಸಾವಯವ ಅಂಶ ಕಡಿಮೆಯಾಗಿ ನೀರನ್ನು ಹಿಡಿದಿಟ್ಟುಕೊಳ್ಳಲು ವಿಫಲವಾಗುತ್ತದೆ,ಕೃಷಿ ತ್ಯಾಜ್ಯವನ್ನು ಸುಡುವುದರಿಂದ ಮತ್ತು ಮಣ್ಣಿಗೆ ಸೇರಿಸುವುದರಿಂದ ಪರಿಸರದ ಮೇಲೆ ಆಗುವ ನಷ್ಟ ಮತ್ತು ಲಾಭವನ್ನು ಹಣದ ರೂಪದಲ್ಲಿ ಲೆಕ್ಕ ಹಾಕಲಾಗದು.

- ಪ್ರಶಾಂತ್ ಜಯರಾಮ್